# ಪತ್ರಿಕಾ ಪ್ರಕಟಣೆ

ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಮೂಡಬಿದ್ರೆ ಆಳ್ವಾಸ್ ಕಾಲೇಜಿನಲ್ಲಿ ದಿನಾಂಕ 28-01-2024 ರಂದು ಭಾನುವಾರ ಸಶಸ್ತ್ರ ಪೊಲೀಸ್ ಕಾನ್‌ಸ್ಟೇಬಲ್ ಸಿಎಆರ್/ಡಿಎಆರ್ (ಪುರುಷ) ಮತ್ತು (ತೃತೀಯ ಲಿಂಗ ಪುರುಷ) ಹುದ್ದೆಗಳ ಲಿಖಿತ ಪರೀಕ್ಷೆ ನಡೆಯಲಿದ್ದು, ಸದ್ರಿ ಪರೀಕ್ಷಾ ಸಮಯ ಯಾವುದೇ ಅಕ್ರಮ, ಕಾನೂನುಬಾಹಿರ ಚಟುಟಿಕೆಗಳು ನಡೆಯದಂತೆ ಹಾಗೂ ಪರೀಕ್ಷೆಗಳು ದೋಷರಹಿತವಾಗಿ ನಡೆಸುವ ನಿಟ್ಟಿನಲ್ಲಿ, ಪರೀಕ್ಷೆ ನಡೆಯುವ ದಿನಾಂಕ: 28-01-2024 ರಂದು ಮಂಗಳೂರು ನಗರ ಪೊಲೀಸ್ ಕಮಿಷನರೇಟ್ ವ್ಯಾಪ್ತಿಯ ಮೂಡಬಿದ್ರೆ ಆಳ್ವಾಸ್ ಕಾಲೇಜಿನ ಸುತ್ತಮುತ್ತ ಪರೀಕ್ಷೆ ಕೇಂದ್ರದ 200 ಮೀ. ವ್ಯಾಪ್ತಿ ಪ್ರದೇಶದ ಸುತ್ತಲೂ ದಂಡ ಪ್ರಕ್ರಿಯೆ ಸಂಹಿತೆಯ ಕಲಂ 144 ರಂತೆ ನಿಷೇಧಿತ ಪ್ರದೇಶವೆಂದು ಘೋಷಿಸಿ, ನಿಷೇದಾಜ್ಞೆಯನ್ನು ಜ್ಯಾರಿಗೊಳಿಸಲಾಗಿದೆ.

ನಿಷೇಧಿತ ಪ್ರದೇಶದಲ್ಲಿ ನಿಷೇಧಾಜ್ಞೆಯು ಜಾರಿಯಲ್ಲಿರುವಾಗ ಈ ಕೆಳಕಂಡ ಚಟುವಟಿಕೆಗಳನ್ನು ಸಂಪೂರ್ಣವಾಗಿ ನಿಷೇಧಿಸಲಾಗಿದೆ.

- ಪರೀಕ್ಷೆಗೆ ಸಂಬಂಧಿಸಿದ ಅಭ್ಯರ್ಥಿಗಳನ್ನು ಹೊರತುಪಡಿಸಿ ಸಾರ್ವಜನಿಕರು 5 ಅಥವಾ 5ಕ್ಕಿಂತ ಐದಕ್ಕಿಂತ ಹೆಚ್ಚಿನ ಸಂಖ್ಯೆಯಲ್ಲಿ ಗುಂಪು ಸೇರುವುದು ಯಾ ತಿರುಗಾಡುವುದು.
- ಯಾವುದೇ ರೀತಿಯಲ್ಲಿ ನಕಲು ಮಾಡಲು ಸಹಾಯ ಮಾಡುವುದು, ಚೀಟಿ ಅಥವಾ ಇನ್ನಿತರ ರೀತಿಯಲ್ಲಿ ಉತ್ತರಗಳನ್ನು ಬರೆದು , ಅಥವಾ ಇನ್ನಾವುದೇ ವಸ್ತುಗಳನ್ನು ಹಂಚುವುದು, ರವಾನಿಸುವುದು ಇತ್ಯಾದಿ
- ಯಾವುದೇ ರೀತಿಯ ಆಸಿಡ್ ಅಥವಾ ಸ್ಫೋಟಕ ವಸ್ತುಗಳನ್ನು ಕೊಂಡುಹೋಗುವುದನ್ನು ಹಾಗೂ ಇನ್ನಿತರ ಮಾರಕ ಆಯುಧಗಳನ್ನು ಹೊಂದುವುದು.
- ಪರೀಕ್ಷೆಗೆ ಸಂಬಂಧಿಸಿದ ಯಾವುದೇ ವಿಷಯಗಳನ್ನು ತಿಳಿಸುವ ಸಲುವಾಗಿ ಸಂಜ್ಞೆಗಳನ್ನು ಮಾಡುವುದು ಹಾಗೂ ಇನ್ನಿತರ ಕ್ರಿಯೆಗಳಲ್ಲಿ ತೊಡಗುವುದು.
- ಪರೀಕ್ಷೆ ಪ್ರಾರಂಭವಾಗುವ 1 ಗಂಟೆ ಮುಂಚಿತವಾಗಿ ಹಾಗೂ ಪರೀಕ್ಷಾ ಅವಧಿಯವರೆಗೆ ಪರೀಕ್ಷಾ ಕೇಂದ್ರಗಳ ಸುತ್ತಲಿನ 200 ಮೀಟರ್ ಪ್ರದೇಶದಲ್ಲಿ ಜೆರಾಕ್ಸ್ ಅಂಗಡಿಗಳು ಕಾರ್ಯ ನಿರ್ವಹಿಸುವುದು.
- ಮೊಬೈಲ್ ದೂರವಾಣಿ, ಬ್ಲೂಟೂತ್ ಹಾಗೂ ಪೇಜರ್ ಇತ್ಯಾದಿ ಎಲೆಕ್ಟ್ರಾನಿಕ್ಸ್ ಸಂಪರ್ಕ ಉಪಕರಣಗಳ ಬಳಕೆ.
- ಜ್ಯಾರಿಯಲ್ಲಿರುವ ಅವಧಿಯಲ್ಲಿ ನಿರ್ಭಂದಿತ ಪ್ರದೇಶವಾದ ಆಳ್ವಾಸ ಶಿಕ್ಷಣ ಸಂಸ್ಥೆ ಮೂಡಬಿದ್ರೆ, ಇದರ 200 ಮೀಟರ್ ಅಂತರದಲ್ಲಿ ಯಾವುದೇ ರೀತಿಯ ವಾಹನಗಳನ್ನು ಅನಧಿಕೃತ ನಿಲುಗಡೆ.

ಸ್ಥಳ: ಮಂಗಳೂರು

ದಿನಾಂಕ 26-01-2024

ಪೊಲೀಸ್ ಆಯುಕ್ತರು

ಮಂಗಳೂರು ನಗರ, ಮಂಗಳೂರು